**ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ**

**ಸಿ ಸಿ ನಂ. 71/2021**

**ಚಾ.ಸಾ.** 9

**ಪ್ರಾ.ಸಾ.** 3

**ದಿನಾಂಕಃ 12.03.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.**

| | |
|---|---|
| ಸಾಕ್ಷಿಯ ಹೆಸರು | ವಿಜಯ ಬಿರಾದರ |
| ತಂದೆಃ ಗಂಡನ ಹೆಸರು | ಬಸನಗೌಡ |
| ಉದ್ಯೋಗ | ಡಿ ಎಸ್ ಪಿ ಕರ್ನಾಟಕ ಲೋಕಾಯುಕ್ತ |
| ವಯಸ್ಸು | 49 ವರ್ಷ |
| ವಾಸಸ್ಥಳ | ಗದಗ |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದ**

ದಿಃ 26.07.2017 ರಿಂದ ದಿಃ 18.01.2021 ರವರೆಗೆ ಕಲಘಟಗಿ ಪೊಲೀಸ ಠಾಣೆ ಆರಕ್ಷಕ ನಿರೀಕ್ಷಕ ಎಂದು ಕರ್ತವ್ಯ ನಿರ್ವಹಿಸಿದ್ದೇನೆ.

ದಿಃ 22.10.2020 ರಂದು ಚಾಸಾ-8 ರವರಿಂದ ಈ ಪ್ರಕರಣದ ಕಡತವನ್ನು ಸ್ವೀಕರಿಸಿ ಮುಂದಿನ ತನಿಖೆಯನ್ನು ಕೈಗೊಂಡಿರುತ್ತೇನೆ. ದಿಃ 23.10.2020 ರಂದು ಚಾಸಾ-6 ರವರ ಮುಖಾಂತರ ಈ ಪ್ರಕರಣದ ಮುದ್ದೆಮಾಲನ್ನು ರಾಸಾಯನಿಕ ಪರೀಕ್ಷೆಗಾಗಿ ಎಫ್ ಎಸ್ ಎಲ್ ಧಾರವಾಡದವರಿಗೆ ಕಳುಹಿಸಿರುತ್ತೇನೆ. ದಿಃ 29.10.2020 ರಂದು ಚಾಸಾ-6 ರವರ ಹೇಳಿಕೆಯನ್ನು ಪಡೆದಿರುತ್ತೇನೆ. ದಿಃ 24.11.2020 ರಂದು ಎಫ್ ಎಸ್ ಎಲ್ ಧಾರವಾಡದವರಿಂದ ವರದಿಯನ್ನು ಸ್ವೀಕರಿಸಿ ಕಡತಕ್ಕೆ

ಅಳವಡಿಸಿರುತ್ತೇನೆ. ದಿಃ 25.11.2020 ರಂದು ಆರೋಪಿಯ ವಿರುದ್ಧ ಸಾಕ್ಷ್ಯಾಧಾರಗಳು ಲಭ್ಯವಾಗಿರುವ ಕಾರಣ ಅಂತಿಮ ವರದಿಯನ್ನು ತಯಾರಿ ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

ಸಾಕ್ಷಿಯು ಎಫ್ ಎಸ್ ಎಲ್ ರವರಿಗೆ ಕಳುಹಿಸಿದ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ11 ಎಂದು ಗುರುತಿಸಲಾಯಿತು.

ಸಾಕ್ಷಿಯು ಸೂಚನಾ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ12 ಎಂದು, ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ12(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ಮಾಲುಪಟ್ಟಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ13 ಎಂದು, ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ13(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ರಾಸಾಯನಿಕ ಪರೀಕ್ಷೆಯ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ14 ಎಂದು, ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ14(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ 48 ಟೆಟ್ರಾ ಪಾಕೇಟಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ಒಟ್ಟು ಮು.ಮಾ.1 ಎಂದು ಗುರುತಿಸಲಾಗಿದೆ.

ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ವ್ಯಕ್ತಿಯನ್ನು ನೋಡಿ ಗುರುತಿಸಿದ್ದು, ಸದರಿ ವ್ಯಕ್ತಿಯು ಹೆಸರು ಈರಪ್ಪ ಹರಿಜನ ಎಂದು ಈ ಪ್ರಕರಣದ ಆರೋಪಿ ಎಂದು ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಅಪಾದಿತನ ಪರ ಶ್ರೀ ಎಸ್ ಎಸ್ ಡಿ ವಕೀಲರಿಂದ**

ತನಿಖಾ ಕಾಲದಲ್ಲಿ ನಾನು ಗುನ್ನಾ ಸ್ಥಳಕ್ಕೆ ಹೋಗಿ ನೋಡಿಲ್ಲ. ನಾನು ಈ ಪ್ರಕರಣದಲ್ಲಿ ಭಾಗಶಃ ತನಿಖಾಧಿಕಾರಿಗಳು ಎಂದರೆ ಸರಿ. ಚಾಸಾ-8 ರವರು ನೀಡಿದ ಕಡತದ ಆಧಾರದ ಮೇಲೆ ನೀವು ಅಂತಿಮ ವರದಿಯನ್ನು ಸಲ್ಲಿಸಿದ್ದೀರಾ ಎಂದರೆ ಸಾಕ್ಷಿಯು ಚಾಸಾ-8 ರವರು ನೀಡಿದ ಕಡತದ ಆಧಾರದ ಮೇಲೆ ತಾನು ತನಿಖೆ ಮಾಡಿ ನಂತರ ಅಂತಿಮ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುವುದಾಗಿ

ನುಡಿಯುತ್ತಾರೆ. ಈ ಪ್ರಕರಣದ ಸಾಕ್ಷಾದಾರರ ಹೇಳಿಕೆಗಳನ್ನು ನೀವು ಖುದ್ದಾಗಿ ಪಡೆದಿದ್ದಿರಾ ಎಂದರೆ ಸಾಕ್ಷಿಯು ಚಾಸಾ-6 ರವರ ಹೇಳಿಕೆಯನ್ನು ಹೊರತುಪಡಿಸಿ ಇನ್ನುಳಿದ ಸಾಕ್ಷಿದಾರರ ಹೇಳಿಕೆಯನ್ನು ಪಡೆದಿಲ್ಲ ಎಂದು ನುಡಿಯುತ್ತಾರೆ. ಈ ಪ್ರಕರಣದ ಅಂತಿಮ ವರದಿಯಲ್ಲಿ ಶೋಧನಾ ವಾರಂಟ ಪಡೆದಿರುವ ಬಗ್ಗೆ ನಾನು ನಮೂದು ಮಾಡಿಲ್ಲ. ಈ ಪ್ರಕರಣದ ಅಂತಿಮ ವರದಿಯಲ್ಲಿ ದಾಳಿ ಮಾಡಿರುವ ವೇಳೆ ತೆಗೆದಿರುವ ಯಾವುದಾದರೂ ಪೋಟೋ ಅಥವಾ ವೀಡಿಯೋಗಳನ್ನು ಅಂತಿಮ ವರದಿಯಲ್ಲಿ ಅಳವಡಿಸಿ ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿದ್ದಿರಾ ಎಂದರೆ ಸಾಕ್ಷಿಯು ಈ ಹಿಂದೆ ತನಿಖೆ ಮಾಡಿದ ಚಾಸಾ-8 ರವರು ಹಾಗೂ ದಾಳಿ ಮಾಡಿದ ಚಾಸಾ-1 ರವರು ಯಾವುದೇ ವೀಡಿಯೋ ಅಥವಾ ಪೋಟೋಗಳನ್ನು ಹಾಜರುಪಡಿಸದ ಇದ್ದ ಕಾರಣ ತಾನು ಕಡತದಲ್ಲಿ ಅಳವಡಿಸಿ ವಾನ್ಯ ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ ಎಂದು ನುಡಿಯುತ್ತಾರೆ. ಮು.ಮಾ1 ರಲ್ಲಿರುವ ಮುದ್ದೆಮಾಲು ಯಾವುದೇ ಪಂಚರು ಸಹಿಯುಳ್ಳ ಚೀಟಿಯನ್ನು ಅಂಟಿಸಿದ ಮುದ್ದೆಮಾಲು ಅಲ್ಲ ಎಂದರೆ ಸರಿಯಲ್ಲ. ಈ ಪ್ರಕರಣದಲ್ಲಿ ಯಾವುದೇ ಮುದ್ದೆಮಾಲು ವಶಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಎಫ್ ಎಸ್ ಎಲ್ ರವರಿಗೆ ಯಾವುದೇ ಮುದ್ದೆಮಾಲನ್ನು ಕಳುಹಿಸಿಲ್ಲ ಎಂದರೆ ಸರಿಯಲ್ಲ. ಠಾಣೆಯಲ್ಲಿ ಈ ಪ್ರಕರಣದ ದಾಖಲೆಗಳನ್ನು ತಯಾರಿಸಿಕೊಂಡು ಕಡತಕ್ಕೆ ಅಳವಡಿಸಿ ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿ ಇಂದು ನ್ಯಾಯಾಲಯಕ್ಕೆ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ.

**ಮರು-ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

**ಓ ಹೇ ಕೆ ಸರಿ ಇದೆ,**

**ದಿವಾಣಿ ನ್ಯಾಯಾಧೀಶರು ಹಾಗೂ**

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ.**